# ಕುವೆಂಪು ವಿಶ್ವವಿದ್ಯಾಲಯ

## *ವಿದ್ಯಾವಿಷಯಕ ಪರಿಷತ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳು*

## ಸಭಾ ದಿನಾಂಕ : 21-07-2023

ಪ್ರಾಧಿಕಾರಗಳ ವಿಭಾಗ

ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451
ಶಿವಮೊಗ್ಗ ಜಿಲ್ಲೆ.

ಫ್ಯಾಕ್ಸ್: 08282-256262
ಇ-ಮೇಲ್: drsyndicateku@gmail.com

☎08282-256148 (ಪ್ರಾಧಿಕಾರಗಳ ವಿಭಾಗ)
ವೆಬ್‌ಸೈಟ್: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ- 577 451

ಸಂಖ್ಯೆ: ಕುವಿ:ಯುಎಟಿ-I:ಎಸಿ-33ಫ:01: 956 :2023-24 ದಿನಾಂಕ:01-08-2023

ಮಾನ್ಯರೆ,

ವಿಷಯ: ದಿನಾಂಕ:21-07-2023ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳು.

***

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ - 2000ರ ಪ್ರಕರಣ - 31(xviii) ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ-1 (ii)ರನ್ವಯ ದಿನಾಂಕ:21-07-2023ರಂದು ವಿಶ್ವವಿದ್ಯಾಲಯದ **ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್** ಸಭಾಂಗಣದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ-17ರ ಪ್ರಕಾರ ಸದರಿ ನಡಾವಳಿಗಳನ್ನು ಕಳುಹಿಸಿದ 21 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

**ವಿ.ಸೂ.: ಸದರಿ ನಡಾವಳಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಯಥಾವತ್ತಾಗಿ ಪ್ರಕಟಿಸಲಾಗಿದೆ.**

ತಮ್ಮ ವಿಶ್ವಾಸಿ,

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಗೆ,

ವಿದ್ಯಾವಿಷಯಕ ಪರಿಷತ್ತಿನ ಎಲ್ಲಾ ಸದಸ್ಯರುಗಳಿಗೆ.

ಪ್ರತಿಗಳು:-

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8) ನಿರ್ದೇಶಕರು,ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರ ಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
9) ಎಲ್ಲಾ ಅಧ್ಯಕ್ಷರು / ಸಂಚಾಲಕರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ./ಶಿವಮೊಗ್ಗ/ ಕಡೂರು./ ಚಿಕ್ಕಮಗಳೂರು
10) ಎಲ್ಲಾ ಉಪಕುಲಸಚಿವರು./ಸಹಾಯಕ ಕುಲಸಚಿವರುಗಳು/ ಅಧೀಕ್ಷಕರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
11) ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ ಶಿವಮೊಗ್ಗ.
12) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ಬಿ.ಹೆಚ್ ರಸ್ತೆ ಕಡೂರು.
13) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಚಿಕ್ಕಮಗಳೂರು. ಕುವೆಂಪು ವಿಶ್ವವಿದ್ಯಾಲಯ
14) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
15) ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
16) ಕಾರ್ಯಪಾಲಕ ಅಭಿಯಂತರರು, ವಿಶ್ವವಿದ್ಯಾಲಯ ಇಂಜಿನಿಯರಿಂಗ್ ವಿಭಾಗ, ವಿಶ್ವವಿದ್ಯಾಲಯ, ಶಂಕರಘಟ್ಟ
17) ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಚಯ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
19) ಕಛೇರಿ ಪ್ರತಿ

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ : 21-07-2023 ರಂದು ಶುಕ್ರವಾರ ಅಪರಾಹ್ನ:3.00 ಗಂಟೆಗೆ ವಿಶ್ವವಿದ್ಯಾಲಯದ ಆಡಳಿತ ಭವನದ ಮೂರನೇ ಮಹಡಿಯ "ಸಿಂಡಿಕೇಟ್ ಸಭಾಂಗಣ" ನಡೆದ ವಿದ್ಯಾವಿಷಯಕ ಪರಿಷತ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳು.

**ಹಾಜರಿದ್ದ ಸದಸ್ಯರು :**

| | | |
|---|---|---|
| 1. | ಪ್ರೊ, ಬಿ.ಪಿ ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಪ್ರೊ, ಗೀತಾ ಸಿ. ಕುಲಸಚಿವರು (ಪ್ರಭಾರ) | ಸದಸ್ಯ ಕಾರ್ಯದರ್ಶಿ |
| 3. | ಪ್ರೊ, ನವೀನ್ ಕುಮಾರ್ ಎಸ್.ಕೆ., ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಡಾ. ವಿಷ್ಣಮೂರ್ತಿ ಕೆ.ಎ. ಜಂಟಿ ನಿರ್ದೇಶಕರು | ಸದಸ್ಯರು |
| 5. | ಶ್ರೀ ತ್ರಿಪುರ ಮಹೇಶ್ವರ ಎಂ., ಪ್ರಾಂಶುಪಾಲರು | ಸದಸ್ಯರು |
| 6. | ಡಾ. ಶೇಖರ, ಪ್ರಾಂಶುಪಾಲರು | ಸದಸ್ಯರು |
| 7. | ಡಾ. ಪರಮೇಶ ಮಸಲವಾಡ, ಪ್ರಾಂಶುಪಾಲರು | ಸದಸ್ಯರು |
| 8. | ಡಾ. ಮುಷ್ತಾಕ್ ಅಹಮದ್, ಪ್ರಾಂಶುಪಾಲರು | ಸದಸ್ಯರು |
| 9. | ಡಾ. ಮಧು ಜಿ., ಪ್ರಾಂಶುಪಾಲರು | ಸದಸ್ಯರು |
| 10. | ಶ್ರೀ ವಿನ್‌ಸೆಂಟ್ ಕಾಡೋರ್ಜಿ, ಪ್ರಾಂಶುಪಾಲರು | ಸದಸ್ಯರು |
| 11. | ಶ್ರೀ ಚಂದ್ರಶೇಖರ್ ಎಸ್ | ಸದಸ್ಯರು |
| 12. | ಶ್ರೀ ಎಂ.ಎ. ರಮೇಶ್ ಹೆಗಡೆ | ಸದಸ್ಯರು |
| 13. | ಶ್ರೀಮತಿ ಗೀತಾಂಜಲಿ | ಸದಸ್ಯರು |
| 14. | ಶ್ರೀಮತಿ ಮಮತಾ ಸಾಲಿ, ಪ್ರಾಂಶುಪಾಲರು | ಸದಸ್ಯರು |
| 15. | ಶ್ರೀ ಕುಮಾರೇಗೌಡ | ಸದಸ್ಯರು |
| 16. | ಶ್ರೀ ಮನೋಜ್ ಸಲ್ಡಾನಾ | ಸದಸ್ಯರು |
| 17. | ಶ್ರೀ ಶಿವಣ್ಣ ಪಿ | ಸದಸ್ಯರು |
| 18. | ಡಾ. ನರಸಿಂಹಮೂರ್ತಿ ಎಸ್.ಕೆ. ಪ್ರಾಧ್ಯಾಪಕರು | ಸದಸ್ಯರು |
| 19. | ಡಾ. ಎಸ್. ಚಂದ್ರಶೇಖರ್, ಪ್ರಾಧ್ಯಾಪಕರು | ಸದಸ್ಯರು |
| 20. | ಡಾ. ಆರ್ತೋಬನಾಯಕ ವೈ., ಪ್ರಾಧ್ಯಾಪಕರು | ಸದಸ್ಯರು |
| 21. | ಡಾ. ಗೀತಾ ಸಿ., ಡೀನರು., ಶಿಕ್ಷಣ ನಿಕಾಯ | ಸದಸ್ಯರು |
| 22. | ಡಾ. ಯೋಗೀಶ್ ಎಸ್.ಎನ್., ಪ್ರಾಧ್ಯಾಪಕರು | ಸದಸ್ಯರು |
| 23. | ಪ್ರೊ, ವೆಂಕಟೇಶ್ ಎಸ್, ಡೀನರು., ವಾಣಿಜ್ಯ ನಿಕಾಯ | ಸದಸ್ಯರು |
| 24. | ಪ್ರೊ, ಎಸ್.ವಿ.ಕೃಷ್ಣಮೂರ್ತಿ. ಡೀನರು., ವಿಜ್ಞಾನ ನಿಕಾಯ | ಸದಸ್ಯರು |
| 25. | ಡಾ. ಆರ್.ಹೆಚ್. ವಾಲ್ಮೀಕಿ ಗ್ರಂಥಪಾಲಕರು. (ಪ್ರಭಾರ) | ಸದಸ್ಯರು |
| 26. | ಪ್ರೊ, ಎಸ್.ಕೆ. ನರಸಿಂಹಮೂರ್ತಿ, ಹಣಕಾಸು ಅಧಿಕಾರಿ & ನಿರ್ದೇಶಕರು ಯೋಜನೆ, ಮೇಲ್ವಿಚಾರಣೆ ಮತ್ತು | ಸದಸ್ಯರು |
| 27. | ಡಾ. ನಾಗರಾಜ. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, | ಸದಸ್ಯರು |
| 28. | ಡಾ. ಜಿ. ಪ್ರಶಾಂತ್ ನಾಯಕ., ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ | ಸದಸ್ಯರು |
| 29. | ಡಾ. ರಮೇಶಬಾಬು, ನಿರ್ದೇಶಕರು, ದೂಶಿನಿ | ವಿಶೇಷ ಆಹ್ವಾನಿತರು |

**ಗೈರು ಹಾಜರಾದ ಸದಸ್ಯರು :**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| 2. | ಶ್ರೀ ಎಸ್. ರುದ್ರೇಗೌಡ., ಕರ್ನಾಟಕ ವಿಧಾನ ಪರಿಷತ್ ಸದಸ್ಯರು | ಸದಸ್ಯರು |
| 3. | ಡಾ. ಲಕ್ಷ್ಮೀಶ ಎ.ಎಸ್. ಪ್ರಾಂಶುಪಾಲರು | ಸದಸ್ಯರು |
| 4. | ಡಾ. ಉಮೇಶ್ ಕೆ., ಪ್ರಾಂಶುಪಾಲರು | ಸದಸ್ಯರು |
| 5. | ಶ್ರೀಮತಿ ಎಸ್.ಬಿ. ಅನುಪಮ | ಸದಸ್ಯರು |
| 6. | ಡಾ. ರವಿಕಿರಣ ಹೆಚ್.ಕೆ. | ಸದಸ್ಯರು |
| 7. | ಡಾ. ಪದ್ಮಮ್ಮ ಎಸ್. ಪ್ರಾಧ್ಯಾಪಕರು | ಸದಸ್ಯರು |
| 8. | ಡಾ. ಶಿವಾನಂದ ಕೆಳಗಿನಮನೆ ಪ್ರಾಧ್ಯಾಪಕರು | ಸದಸ್ಯರು |
| 9. | ಡಾ. ಎನ್.ಡಿ. ವಿರೂಪಾಕ್ಷ (ಪ್ರಭಾರ), ನಿರ್ದೇಶಕರು, ದೈಹಿಕ ಶಿಕ್ಷಣ | ಸದಸ್ಯರು |
| 10. | ಪ್ರೊ, ಎನ್. ಬಿ. ತಿಪ್ಪೇಸ್ವಾಮಿ., ನಿರ್ದೇಶಕರು ಐ.ಕ್ಯೂ.ಎ.ಸಿ | ವಿಶೇಷ ಆಹ್ವಾನಿತರು |

**ಪ್ರಸ್ತಾವನೆ:**

ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು. ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಘನತೆವೆತ್ತ ಕುಲಾಧಿಪತಿಗಳ ಅನುಮೋದನೆ ಮೇರೆಗೆ ವಿಶ್ವವಿದ್ಯಾಲಯದ 33ನೇ ಘಟಿಕೋತ್ಸವವನ್ನು ದಿನಾಂಕ:22-07-2023ರಂದು ಏರ್ಪಡಿಸಿದೆ. ಕುಲಾಧಿಪತಿಗಳಾದ ಶ್ರೀ ಥಾವರ್ ಚಂದ್ ಗೆಹ್ಲೋಟ್‌ರವರು ಅಗ್ರಾಸನ ವಹಿಸಲಿದ್ದು, ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ. ಸುಧಾಕರ್‌ರವರು ಉಪಸ್ಥಿತರಿರುವರು. ಪದ್ಮಭೂಷಣ ಮತ್ತು ಪದ್ಮಶ್ರೀ ಪುರಸ್ಕೃತ ಡಾ.ಸುರೇಶ್, ಬಿ.ಎನ್., ರವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಈ ಘಟಿಕೋತ್ಸವ ಸಮಾರಂಭವು ವಿದ್ಯಾರ್ಥಿಗಳು ಹಾಗೂ ಸಂಶೋಧನಾರ್ಥಿಗಳಿಗೆ ಸಂಭ್ರಮದ ಶೈಕ್ಷಣಿಕ ಉತ್ಸವವಾಗಿದೆ ಎಂದರು. ಮುಂದುವರೆದು ಮಾತನಾಡಿದ ಅವರು, ಪ್ರೊ. ಕಸ್ತೂರಿರಂಗನ್‌ರವರು ನೀಡಿರುವ ವರದಿಯ ಪ್ರಕಾರ ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳಾದ ನಂತರವೂ ಕೇವಲ ಶೇ.25ರಷ್ಟು ವಿದ್ಯಾರ್ಥಿಗಳು ಮಾತ್ರ ಉನ್ನತ ಶಿಕ್ಷಣವನ್ನು ಪಡೆಯುತ್ತಿದ್ದು, ಇದನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಸರ್ಕಾರವು ಕಾಲೇಜು ಹಾಗೂ ವಿಶ್ವವಿದ್ಯಾಲಯಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸುತ್ತಿದೆ. ಜೊತೆಯಲ್ಲಿ ಖಾಸಗೀ ವಿಶ್ವವಿದ್ಯಾಲಯಗಳು ಕೂಡ ಪ್ರಾರಂಭವಾಗುತ್ತಿವೆ. ಕುವೆಂಪು ವಿಶ್ವವಿದ್ಯಾಲಯವು ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳಲ್ಲಿ ಉತ್ತಮ ಸಾಧನೆ ಮಾಡಿದ್ದು, ವಿಶ್ವವಿದ್ಯಾಲಯದ ಅಧ್ಯಾಪಕರು ದೇಶ ವಿದೇಶಗಳ ಸಂಸ್ಥೆಗೊಂದಿಗೆ ಒಡಂಬಡಿಕೆ ಮಾಡಿಕೊಂಡಿದ್ದಾರೆ. ಹಲವು ಅಧ್ಯಾಪಕರು ಸಂಶೋಧನಾ ಪ್ರಾಜೆಕ್ಟ್‌ಗಳನ್ನು ಹೊಂದಿದ್ದು, ಕೆಲವರು ತಮ್ಮ ಸಂಶೋಧನೆಗೆ ಪೇಟೆಂಟ್ ಕೂಡ ಪಡೆದುಕೊಂಡಿದ್ದಾರೆ ಎಂಬುದನ್ನು ತಿಳಿಸುತ್ತಾ, ವಿಶ್ವವಿದ್ಯಾಲಯದ 33ನೇ ವಾರ್ಷಿಕ ಘಟಿಕೋತ್ಸವವನ್ನು ಯಶಸ್ವಿಗೊಳಿಸಿಕೊಡುವಂತೆ ಸದಸ್ಯರಲ್ಲಿ ವಿನಂತಿಸಿದರು.

ನಂತರ, ಕಾರ್ಯಸೂಚಿಯ ಪ್ರಕಾರ ವಿಷಯಗಳನ್ನು ಚರ್ಚೆಗೆ ಕೈಗೆತ್ತಿಕೊಳ್ಳಲಾಯಿತು.

**2023-ಎಸಿ-33ಘ:01:** ವಿಶ್ವವಿದ್ಯಾಲಯದ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಇತರೆ ಪದವಿಗಳಿಗೆ ಅರ್ಹರಾದ ವಿದ್ಯಾರ್ಥಿಗಳ/ ಅಭ್ಯರ್ಥಿಗಳ ಪಟ್ಟಿ ಅನುಮೋದನೆ ಬಗ್ಗೆ.

**ಚರ್ಚೆ:** ಕುಲಸಚಿವ (ಮೌಲ್ಯಮಾಪನ)ರವರು ಮಾತನಾಡುತ್ತಾ, ವಿಶ್ವವಿದ್ಯಾಲಯದ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ನೀಡಲು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದಾರೆ ಎಂಬ ಮಾಹಿತಿ ನೀಡುತ್ತಾ, ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಮಾಹಿತಿಯನ್ನು ಸಭೆಗೆ ವಿವರಿಸಿ, ಪಟ್ಟಿಗೆ ಅನುಮೋದನೆ ನೀಡುವಂತೆ ಕೋರಿದರು.

ಸದಸ್ಯರಾದ ಪ್ರೊ.ಜಿ. ಪ್ರಶಾಂತನಾಯಕರವರು ಮಾತನಾಡಿ ಗೌರವ ಡಾಕ್ಟರೇಟ್‌ಗೆ ಆಯ್ಕೆಯಾಗಿರುವವರಲ್ಲಿ ನಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯ ಯಾವುದೇ ಗಣ್ಯರ ಹೆಸರಿಲ್ಲ. ಪಟ್ಟಿಯಲ್ಲಿ ಒಬ್ಬ ರಾಜಕಾರಣಿ ಹೆಸರಿದ್ದು, ಸಕ್ರಿಯ ರಾಜಕಾರಣಿಗಳಿಗೆ ಗೌರವ ಡಾಕ್ಟರೇಟ್ ನೀಡಲು ಅವಕಾಶವಿಲ್ಲ. ಸಿಂಡಿಕೇಟ್‌ನಲ್ಲಿ ಹೆಸರುಗಳನ್ನು ನಾಮನಿರ್ದೇಶನ ಮಾಡುವಾಗಲೇ ಹೊರಗಿನವರ ಬದಲು ವಿಶ್ವವಿದ್ಯಾಲಯದ ವ್ಯಾಪ್ತಿಯವರನ್ನು ಪರಿಗಣಿಸಬೇಕಾಗಿತ್ತು ಎಂದರು. ಪ್ರೊ. ವೈ. ಆರ್ತೋಬನಾಯಕ ರವರು ಮಾತನಾಡಿ, ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ತನ್ನ ಕಾರ್ಯ ವ್ಯಾಪ್ತಿಯಲ್ಲಿನ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್. ಯಡಿಯೂರಪ್ಪರವರು ದೇಶದಲ್ಲಿಯೇ ಪ್ರಥಮಬಾರಿಗೆ ಕೃಷಿ ಬಜೆಟ್ ಮಂಡಿಸಿರುವುದು ಹಾಗೂ ಕೃಷಿ ಕ್ಷೇತ್ರಕ್ಕೆ ಅವರ ಕೊಡುಗೆಯನ್ನು ಪರಿಗಣಿಸಿ ಗೌರವ ಡಾಕ್ಟರೇಟ್‌ಗೆ ಆಯ್ಕೆ ಮಾಡಿದೆ. ಹಾಗೆಯೇ ನಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ

ಸಕ್ರಿಯ ರಾಜಕಾರಣದಲ್ಲಿ ಇಲ್ಲದ ಹಿರಿಯ ರಾಜಕಾರಣಿಗಳನ್ನು ಪರಿಗಣಿಸಿದ್ದರೆ ವಿಶ್ವವಿದ್ಯಾಲಯದ ಘನತೆ ಹೆಚ್ಚಾಗುತ್ತಿತ್ತು ಎಂದರು.

ಡೀನರಾದ ಪ್ರೊ.ಎಸ್.ವಿ. ಕೃಷ್ಣಮೂರ್ತಿಯವರು ಮಾತನಾಡುತ್ತಾ, ಗೌರವ ಡಾಕ್ಟರೇಟ್ ಪ್ರಧಾನ ಕುರಿತಾಗಿ ಈ ಹಿಂದೆ ವಿಶ್ವವಿದ್ಯಾಲಯವು ವಿನಿಯಮ ರಚಿಸಿದ್ದು, ಅದರಲ್ಲಿ ಸಕ್ರಿಯ ರಾಜಕಾರಣಿಗಳನ್ನು ಪರಿಗಣಿಸಲು ಅವಕಾಶವಿಲ್ಲ. ಅಲ್ಲದೇ, ವಿಶ್ವವಿದ್ಯಾಲಯದ ವ್ಯಾಪ್ತಿಯ ಗಣ್ಯರಿಗೆ ಹೆಚ್ಚಿನ ಪ್ರಾಧ್ಯಾನ್ಯತೆ ನೀಡಬೇಕಾಗಿದೆ. ಈ ಹಿನ್ನೆಲೆಯಲ್ಲಿ ವಿನಿಯಮದ ಪ್ರಕಾರವೇ ಗೌರವ ಡಾಕ್ಟರೇಟ್‌ಗೆ ಗಣ್ಯರನ್ನು ಆಯ್ಕೆ ಮಾಡಲು ಕ್ರಮ ವಹಿಸಬೇಕೆಂದರು. ಎಲ್ಲಾ ಸದಸ್ಯರು ಇದಕ್ಕೆ ಸಹಮತ ವ್ಯಕ್ತಪಡಿಸಿದರು.

ನಿರ್ಣಯ: ಚರ್ಚೆಯ ನಂತರ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನು ಸಭೆಯು ಅನುಮೋದಿಸಿತು. ಹಾಗೂ ಮುಂದಿನ ವರ್ಷಗಳಲ್ಲಿ ಗೌರವ ಡಾಕ್ಟರೇಟ್‌ಗೆ ಗಣ್ಯರನ್ನು ಆಯ್ಕೆ ಮಾಡಲು ವಿಶ್ವವಿದ್ಯಾಲಯ ರಚಿಸಿರುವ ವಿನಿಯಮವನ್ನು ಅನುಸರಿಸಬೇಕೆಂದು ನಿರ್ಣಯಿಸಲಾಯಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಸಹಿ/-
ಕುಲಪತಿಗಳು